1. ಜಮಖಂಡಿ ರೂ. 22.77 ಕೋಟಿ

2. ರಬಕವಿ-ಬನಹಟ್ಟಿ ರೂ. 24.28 ಕೋಟಿ

ಮೇಲೆ ನಮೂದಿಸಿರುವ ಹೂಡಿಕೆ ಹಣದಲ್ಲಿ ಶೇ.90 ರಷ್ಟು ಅನುದಾನವಾಗಿರುತ್ತದೆ.

ಈ. ಯೋಜನೆಯಡಿಯಲ್ಲಿ ಈ ಕೆಳಕಂಡ ಆದ್ಯತೆಯ ನಗರ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಳ್ಳಲು ಯೋಜಿಸಲಾಗಿದೆ.

1. ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ

2. ಮಳೆನೀರಿನ ಚರಂಡಿಗಳು

3. ರಸ್ತೆ ಅಭಿವೃದ್ಧಿ

4. ಬಡತನ ನಿರ್ಮೂಲನೆ

5. ಮುನಿಸಿಪಲ್‌ಯೇತರ ಕಾಮಗಾರಿಗಳು

466 (662) ಶ್ರೀ ಸಿದ್ದು ಸಾವದಿ (ಜಮಖಂಡಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಜಮಖಂಡಿ ತಾಲ್ಲೂಕಿನಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಯುವುದರ ಬಗ್ಗೆ ಕಳೆದ ಅಧಿವೇಶನದಲ್ಲಿ ಪ್ರಶ್ನೆ ಸಂಖ್ಯೆ:3956 ರಲ್ಲಿ ಕೇಳಿದ ಪ್ರಶ್ನೆಗೆ ಸರ್ಕಾರ ನೀಡಿದ ಉತ್ತರವು ಅಸಮಂಜಸವಾಗಿದ್ದು, ಅಕ್ರಮ ಗಣಿಗಾರಿಕೆ ಈಗಲೂ ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದ್ದರೂ ಸದನಕ್ಕೆ ತಪ್ಪು ಮಾಹಿತಿ ನೀಡುತ್ತಿರುವ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆ:

ಆ) ಜಮಖಂಡಿ ತಾಲ್ಲೂಕಿನಲ್ಲಿ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಕೋಟ್ಯಂತರ ರೂಪಾಯಿಗಳ ಬೆಲೆ ಬಾಳುವ ಕಲ್ಲು ಹಾಗೂ ಮರಳು ಲೂಟಿ ಆಗುತ್ತಿರುವುದನ್ನು ತಪ್ಪಿಸಿ, ಅಧಿಕೃತಗೊಳಿಸಿ ಸರ್ಕಾರದ ಬೊಕ್ಕಸಕ್ಕೆ ಆದಾಯ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ: ಹಾಗಿದ್ದಲ್ಲಿ ಇದಕ್ಕೆ ಕಾರಣಕರ್ತರಾದವರ ಮೇಲೆ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳುವುದೆ:

ಇ) ಈ ಪ್ರದೇಶದಲ್ಲಿ ಸುಂದರ ಕಟ್ಟಡದ ಕಲ್ಲು ಮತ್ತು ಮರಳನ್ನು ಗಣಿಗಾರಿಕೆ ಮಾಡಲು ಗುತ್ತಿಗೆ ನೀಡಲು ಸರ್ಕಾರಕ್ಕೆಯಿರುವ ತೊಂದರೆ ಏನು?

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಪ್ರಶ್ನೆ ಸಂಖ್ಯೆ:3956ಕ್ಕೆ ಕಳೆದ ಅಧಿವೇಶನದಲ್ಲಿ ಸರ್ಕಾರ ನೀಡಿದ ಉತ್ತರವು ಲಭ್ಯವಿದ್ದ ಮಾಹಿತಿಯಂತೆ ಸಮಂಜಸವಾಗಿದೆ. ಅಕ್ರಮ ಗಣಿಗಾರಿಕೆ ತಡೆಗಟ್ಟಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಸಮಿತಿಯನ್ನು ದಿನಾಂಕ: 16.11.2005ರ ಸರ್ಕಾರಿ ಆದೇಶ ಸಂಖ್ಯೆ:ಸಿಐ.194. ಎಂಎಂಎಸ್. 2005ರಲ್ಲಿ ರಚಿಸಲಾಗಿದೆ. ಈ ಸಮಿತಿಯು ಆಗಿಂದಾಗ್ಗೆ ಸಭೆ ಸೇರಿ ಜಿಲ್ಲೆಯಲ್ಲಿ ಅನಧಿಕೃತ ಗಣಿಗಾರಿಕೆ ಬಗ್ಗೆ ಚರ್ಚಿಸಿ ಕ್ರಮ ಕೈಗೊಳ್ಳುತ್ತಿದೆ. ದಿನಾಂಕ:20.06.2006ರಂದು ನಡೆದ ಬಾಗಲಕೋಟೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಸಭೆಯಲ್ಲಿ

ಅರಣ್ಯ ಪ್ರದೇಶದಲ್ಲಿ ಸದ್ಯ ಯಾವುದೇ ಅಕ್ರಮ ಗಣಿಗಾರಿಕೆ ನಡೆದಿರುವುದಿಲ್ಲ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿರುತ್ತಾರೆ. ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಲ್ಲಿ, ತನಿಖೆ ನಡೆಸಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಆ. ಜಮಖಂಡಿ ತಾಲ್ಲೂಕಿನಲ್ಲಿ ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಯು ಕ್ರಮ ಕೈಗೊಳ್ಳುವುದು. ದಿನಾಂಕ:20.6.2006ರಂದು ನಡೆದ ಟಾಸ್ಕ್ ಫೋರ್ಸ್ ಸಮಿತಿಯ ಸಭೆಯಲ್ಲಿ ಅರಣ್ಯ ಪ್ರದೇಶದಲ್ಲಿ ಸದ್ಯ ಯಾವುದೇ ಅಕ್ರಮ ಗಣಿಗಾರಿಕೆ ನಡೆದಿರುವುದಿಲ್ಲ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿರುತ್ತಾರೆ. ಆದ್ದರಿಂದ ಅಕ್ರಮ ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಆದಾಯ ನಷ್ಟವಾಗಿರುವುದು ಕಂಡು ಬಂದಲ್ಲಿ ಸಂಬಂಧಪಟ್ಟವರ ಮೇಲೆ ಕಾನೂನಿನ ರೀತ್ಯ ಕ್ರಮ ಕೈಗೊಳ್ಳಲಾಗುವುದು.

ಇ) ಅರಣ್ಯ ಪ್ರದೇಶದಲ್ಲಿ ಗಣಿಗಾರಿಕೆಗಾಗಿ ಅನುಮತಿ ನೀಡಲು ಅರಣ್ಯ ಸಂರಕ್ಷಣೆ ಕಾಯ್ದೆ 1980ರ ಪ್ರಕಾರ ಕೇಂದ್ರ ಸರ್ಕಾರದ ಅರಣ್ಯ ಇಲಾಖೆಯ ಅನುಮೋದನೆಯ ಅವಶ್ಯಕತೆ ಇರುತ್ತದೆ.

467 (663) ಶ್ರೀ ಸಿದ್ದು ಸಾವದಿ (ಜಮಖಂಡಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಜಮಖಂಡಿ–ಸಾವಳಗಿ ಮಧ್ಯದಲ್ಲಿ ಜಂಬಗಿ ಬಿ.ಕೆ. ಗ್ರಾಮದ ಹತ್ತಿರ ಕೃಷ್ಣಾ ನದಿಗೆ ಸೇತುವೆ ನಿರ್ಮಿಸುವ ಬೇಡಿಕೆ ಶತಮಾನಗಳಿಂದಲೂ ಅತೀ ಅವಶ್ಯವಿದ್ದದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಯಾವ ಯೋಜನೆ ಅಡಿ ಮತ್ತು ಯಾವಾಗ ಈ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು;

ಇ) ಇಷ್ಟೊಂದು ವೈಜ್ಞಾನಿಕವಾಗಿದ್ದ ಈ ಸೇತುವೆಯನ್ನು ಇಲ್ಲಿಯವರೆಗೆ ನಿರ್ಮಿಸದೇ ಇರಲು ಕಾರಣಗಳೇನು;

ಈ) ಈಗಾಗಲೇ ಅರ್ಜಿ ಸಲ್ಲಿಸಿದ್ದು ಇಲ್ಲಿಯವರೆಗೆ ಇದರ ಬಗ್ಗೆ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಬಂದಿದೆ.

ಆ) ಮೊದಲು ಈ ಸೇತುವೆಯು ಜಮಖಂಡಿ ಸಾವಳಗಿ ಗ್ರಾಮೀಣ ರಸ್ತೆಯ ಮೇಲೆ ಇದ್ದುದರಿಂದ ಇದು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುತ್ತಿತ್ತು. ಈ ರಸ್ತೆಯು ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿ ಇರಲಿಲ್ಲವಾದ್ದರಿಂದ ಇದನ್ನು ಇಲ್ಲಿಯವರೆಗೆ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲು ಕ್ರಮ ಕೈಗೊಂಡಿರಲಿಲ್ಲ. ಈಗ ಈ ರಸ್ತೆಯು ಸರ್ಕಾರದ ಆದೇಶ ಸಂಖ್ಯೆ: ಪಿಡಬ್ಲ್ಯುಡಿ 262 ಸಿಆರ್‌ಎಂ 2001 ದಿನಾಂಕ 24.9.2003 ರಲ್ಲಿ ಜಿಲ್ಲಾ ಮುಖ್ಯ ರಸ್ತೆಯೆಂದು ಮೇಲ್ದರ್ಜೆಗೇರಿಸಲಾಗಿದ್ದು ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ